# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಲ್ಪಸಂಖ್ಯಾತರ ಮುಸ್ಲಿಂ ಮಹಿಳಾ ಮತ್ತು ಹೆಣ್ಣುಮಕ್ಕಳಿಗ ಆರೋಗ್ಯ ಪರಿಹಾರ ನಿಧಿಯ ಹೊಸ ಯೋಜನೆ ಅನುಷ್ಠಾನ ಕುರಿತು

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: RD 31 WGA 1991, ದಿನಾಂಕ: 27.03.1992

2. ಸರ್ಕಾರದ ಆದೇಶ ಸಂಖ್ಯೆ: MWD 59 WFW 09, ದಿನಾಂಕ: 25.02.2009

3. ದಿನಾಂಕ: 06.07.2009 ರಂದು ನಡೆದ ಕರ್ನಾಟಕ ರಾಜ್ಯ ವಕ್ಫ್ ಮಹಿಳಾ ಅಭಿವೃದ್ಧಿ ಪ್ರತಿಷ್ಠಾನದ ಸಭೆಯ ನಡವಳಿ

ಪ್ರಸ್ತಾವನೆ:

ಕರ್ನಾಟಕ ರಾಜ್ಯ ವಕ್ಫ್ ಮಹಿಳಾ ಅಭಿವೃದ್ಧಿ ಪ್ರತಿಷ್ಠಾನದ ಸಭೆಯು ದಿನಾಂಕ: 06-07-2009 ರಂದು ಮಾನ್ಯ ವಕ್ಫ್, ಹಜ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ನಡೆಸಲಾಗಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ತೀರ್ಮಾನ ಕೈಗೊಂಡು ಅಲ್ಪಸಂಖ್ಯಾತರ ಮುಸ್ಲಿಂ "ಮಹಿಳಾ ಮತ್ತು ಹೆಣ್ಣುಮಕ್ಕಳಿಗೆ ಆರೋಗ್ಯ ಪರಿಹಾರ ನಿಧಿ" ಎಂಬ ಹೊಸ ಯೋಜನೆಯನ್ನು ಪ್ರಾರಂಭಿಸಲು ಚರ್ಚಿಸಲಾಯಿತು. ಸದರಿ ಯೋಜನೆಯನ್ವಯ ಹೃದಯ, ಕಿಡ್ನಿ, ಕ್ಯಾನ್ಸರ್, ಮೆದುಳು ಮುಂತಾದ ಮಾರಕ ಖಾಯಿಲೆಯಿಂದ ಬಳಲುತ್ತಿರುವ ಮುಸ್ಲಿಂ ಮಹಿಳೆ ಹಾಗೂ ಹೆಣ್ಣು ಮಕ್ಕಳಿಗೆ ಚಿಕಿತ್ಸೆ ಪಡೆಯಲು ಅನುಕೂಲವಾಗುವಂತೆ ಕನಿಷ್ಠ ರೂ. 5000 ರಿಂದ ರೂ. 25000 ಗರಿಷ್ಠ ಮಿತಿಗೊಳಪಟ್ಟ ಹಾಗೂ ಖಾಯಿಲೆಯ ಚಿಕಿತ್ಸಾ ಖರ್ಚಿನ ಅನುಸಾರ ಕೌಟುಂಬಿಕ ವಾರ್ಷಿಕ ಆದಾಯ ರೂ. 1,20,000/-ಕ್ಕಿಂತ ಕಡಿಮೆ ಇರುವಂತಹರಿಗೆ (ಸರ್ಕಾರಿ ನೌಕರರನ್ನು ಹೊರತುಪಡಿಸಿ) ಚಿಕಿತ್ಸೆ ಪಡೆಯಲು ಪರಿಹಾರ ನೀಡಬೇಕೆಂದು ಪ್ರಸ್ತಾಪಿಸಲಾಗಿದೆ.

ಸದರಿ ಪ್ರಸ್ತಾವನೆಯ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರ ಕೆಲವು ಷರತ್ತುಗಳನ್ನು ವಿಧಿಸಿ, ಕರ್ನಾಟಕ ರಾಜ್ಯ ವಕ್ಫ್ ಮಹಿಳಾ ಅಭಿವೃದ್ಧಿ ಪ್ರತಿಷ್ಠಾನದ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತ ಮುಸ್ಲಿಂ ಮಹಿಳೆ ಮತ್ತು ಹೆಣ್ಣುಮಕ್ಕಳಿಗೆ ಆರೋಗ್ಯ ಪರಿಹಾರ ನಿಧಿಯಿಂದ ಚಿಕಿತ್ಸೆ ಪಡೆಯಲು ಪರಿಹಾರ ಮೊತ್ತವನ್ನು ಮಂಜೂರು ಮಾಡಲು ನಿರ್ಧರಿಸಲಾಗಿದೆ. ಆದುದರಿಂದ ಈ ಆದೇಶ.

## ಆದೇಶ ಸಂಖ್ಯೆ: MWD 59 WFW 2009, ಬೆಂಗಳೂರು ದಿ: 01-08-2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರ ಕರ್ನಾಟಕ ರಾಜ್ಯ ವಕ್ಫ್ ಮಹಿಳಾ ಅಭಿವೃದ್ಧಿ ಪ್ರತಿಷ್ಠಾನದ ಅಡಿಯಲ್ಲಿ 'ಅಲ್ಪಸಂಖ್ಯಾತರ ಮುಸ್ಲಿಂ ಮಹಿಳಾ ಹಾಗೂ ಹೆಣ್ಣು ಮಕ್ಕಳ ಆರೋಗ್ಯ ಪರಿಹಾರ ನಿಧಿ' ಎಂಬ ಹೊಸಯೋಜನೆ ಅಡಿಯಲ್ಲಿ ಚಿಕಿತ್ಸೆಯನ್ನು ಪಡೆಯಲು ಅನುದಾನವನ್ನು ಮಂಜೂರು ಮಾಡಲು 2009-10ನೇ ಸಾಲಿಗೆ ಈ ಕೆಳಕಂಡಂತೆ ಆದೇಶಿಸಿದೆ.

1. ಈ ಯೋಜನೆಯು ಅಲ್ಪಸಂಖ್ಯಾತ ಮುಸ್ಲಿಂ ಮಹಿಳೆಯರಿಗೆ ಹಾಗೂ ಹೆಣ್ಣು ಮಕ್ಕಳಿಗೆ ಸೀಮಿತವಾಗಿದ್ದು, ವಾರ್ಷಿಕ ಆದಾಯ ರೂ. 1,20,000/- (ರೂ. ಒಂದು ಲಕ್ಷ ಇಪ್ಪತ್ತು ಸಾವಿರಗಳು ಮಾತ್ರ) ಕ್ಕಿಂತ ಕಡಿಮೆ ಇರತಕ್ಕದ್ದು, ಈ ಯೋಜನೆಯು ಸರ್ಕಾರಿ ನೌಕರರಿಗೆ ಅನ್ವಯಿಸುವುದಿಲ್ಲ.

2. ಅರ್ಜಿದಾರರು ಆರೋಗ್ಯ ಪರಿಹಾರ ನಿಧಿಯ ನಿಗದಿತ ಅರ್ಜಿ ನಮೂನೆಯೊಂದಿಗೆ ಸಂಬಂಧಪಟ್ಟ ತಹಸೀಲ್ದಾರರವರು ನೀಡಿರುವ ಆದಾಯ ಪ್ರಮಾಣ ಪತ್ರದೊಂದಿಗೆ ಸರ್ಕಾರದ ಅಧಿಕೃತವಾದ ಯಾವುದೇ ಆಸ್ಪತ್ರೆ, ನರ್ಸಿಂಗ್ ಹೋಂ ರವರು ನೀಡಿರುವ ಅಂದಾಜು ಪಟ್ಟಿಯೊಂದಿಗೆ ಸಲ್ಲಿಸತಕ್ಕದ್ದು.